# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:15ನೇ ಸೆಪ್ಟೆಂಬರ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

## 02. ಚುನಾವಣಾ ಪ್ರಸ್ತಾವಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಮಾನ್ಯ ಸಭಾನಾಯಕರು ಹಾಗೂ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು) ಅವರು:–**

ಅ) ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯಕ್ಕೆ ಒಬ್ಬರು ಸದಸ್ಯರನ್ನು ಚುನಾಯಿಸುವ ಕುರಿತು.

ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಅಧಿನಿಯಮ 2009ರ ಪ್ರಕರಣ 20(ಐ)ರ ರೀತ್ಯಾ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಪ್ರಶಾಸನ ಸಭೆಗೆ ವಿಧಾನ ಪರಿಷತ್ತಿನ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

ಆ) ಕರ್ನಾಟಕ ರಾಜ್ಯ ಅಂಗವಿಕಲರ ಸಮನ್ವಯ ಸಮಿತಿಗೆ ಒಬ್ಬರು ಸದಸ್ಯರನ್ನು ಚುನಾಯಿಸುವ ಕುರಿತು.

ಅಂಗವಿಕಲರ ವ್ಯಕ್ತಿಗಳ ಅಧಿನಿಯಮ 1995ರ ಪ್ರಕರಣ 13(2)(ಜಿ)ರ ರೀತ್ಯಾ ಕರ್ನಾಟಕ ರಾಜ್ಯ ಅಂಗವಿಕಲರ ಸಮನ್ವಯ ಸಮಿತಿಗೆ ವಿಧಾನ ಪರಿಷತ್ತಿನ ಒಬ್ಬರು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

## 03. ಶಾಸನ ರಚನೆ

### ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಸಂರಕ್ಷಣಾ ವಿಧೇಯಕ, 2022
(2021ರ ವಿಧಾನಸಭೆಯ ವಿಧೇಯಕ ಸಂಖ್ಯೆ–50)

**ಶ್ರೀ ಆರಗ ಜ್ಞಾನೇಂದ್ರ (ಮಾನ್ಯ ಗೃಹ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಸಂರಕ್ಷಣಾ ವಿಧೇಯಕ" (2021ರ ವಿಧಾನಸಭೆಯ ವಿಧೇಯಕ ಸಂಖ್ಯೆ–50)ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ಅಣ್ಣೆಪುರ ಗ್ರಾಮದ ಸರ್ವೆ ನಂ.18ರ ವಾರ್ಡ್ ನಂ.143 ರಲ್ಲಿ ಹಾಪ್ ಕಾಮ್ಸ್ ಸಂಸ್ಥೆಯವರು 2.08 ಎಕರೆ ಜಮೀನನ್ನು ಆಕ್ರಮಿಸಿಕೊಂಡಿರುವ ಕುರಿತು ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

02. **ಶ್ರೀ ಸಲೀಂ ಅಹಮದ್** ಅವರು ಪ್ರಮುಖ ಖಾಯಿಲೆಗಳಿಗೆ ಅಗತ್ಯವಾಗಿ ಬೇಕಾಗಿರುವ ಔಷಧಿಗಳು ಜನೌಷಧ ಕೇಂದ್ರಗಳಲ್ಲಿ ಲಭ್ಯವಿಲ್ಲದಿರುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

03. **ಶ್ರೀ ಸಿ.ಎನ್. ಮಂಜೇಗೌಡ** ಅವರು ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳ ಖಾಯಂ ನೌಕರರಿಗೆ ಆರೋಗ್ಯ ಸಂಜೀವಿನಿ ಯೋಜನೆಯನ್ನು ಜಾರಿಗೊಳಿಸುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

04. **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರು ಚಿಂತಾಮಣಿ ತಾಲ್ಲೂಕು ಕಸಬಾ ಹೋಬಳಿ ಮುನಗನಹಳ್ಳಿಯ ಸರ್ವೆ ನಂ.36/2ರ ಕೆರೆ–ಕಟ್ಟೆ ಮೊದಲಾದ ಜಲಕಾಯಗಳಲ್ಲಿನ ಹಾಗೂ ನಿರ್ಭಂಧಿತ ಪ್ರದೇಶದಲ್ಲಿನ ಅಕ್ರಮ ಕಟ್ಟಡ/ಸಂರಚನೆಗಳನ್ನು ತೆರವುಗೊಳಿಸುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

01. **ಶ್ರೀ ಮರಿತಿಬ್ಬೇಗೌಡ** ಅವರು ಚಿಕ್ಕಬಳ್ಳಾಪುರ ಜಿಲ್ಲೆ, ಚಿಂತಾಮಣಿ ತಾಲ್ಲೂಕು, ಕೋಟಗಲ್ ಗ್ರಾಮದ ಸರ್ವೆ ನಂ.11ರಲ್ಲಿ ಜಿ.ಟಿ.ಬಿ. ಕ್ರಷರ್ಸ್, ಇವರು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳೊಂದಿಗೆ ಶಾಮೀಲಾಗಿ ಕಾನೂನು ಬಾಹಿರವಾಗಿ ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿಕೊಂಡಿರುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಪಿ.ಆರ್ ರಮೇಶ್** ಅವರು ಕುಣಿಗಲ್ ತಾಲ್ಲೂಕಿನ ವೈ. ಹೊಸಹಳ್ಳಿಯಿಂದ ಹಂಪಾಪುರ ಮಧ್ಯೆ ಸುಮಾರು 600 ಮೀಟರ್ ಉದ್ದದ ಸಂಪರ್ಕ ಸೇತುವೆಯನ್ನು ನಿರ್ಮಾಣ ಮಾಡುವ ಕುರಿತು ಪ್ರಸ್ತಾಪಿಸುವುದು.

03. **ಶ್ರೀ ಡಿ.ಎಸ್. ಅರುಣ್** ಅವರು ಶಿವಮೊಗ್ಗ ಜಿಲ್ಲೆಯಲ್ಲಿ ಉತ್ಪಾದನೆಯಾಗುವ ಅಡಿಕೆ ಮಾರಾಟದ ಒಟ್ಟು ವಹಿವಾಟಿನ ತೆರಿಗೆ ಆದಾಯದ ಬಗ್ಗೆ ಗೊಂದಲವಿರುವ ಕುರಿತು ಪ್ರಸ್ತಾಪಿಸುವುದು.

04. **ಶ್ರೀ ಎಂ.ನಾಗರಾಜು ಹಾಗೂ ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರುಗಳು ದಿನಗೂಲಿ ಕಾರ್ಮಿಕರ ಆತ್ಮಹತ್ಯೆಗಳನ್ನು ತಡೆಗಟ್ಟಲು ಕ್ರಮಕೈಗೊಳ್ಳುವ ಕುರಿತು ಪ್ರಸ್ತಾಪಿಸುವುದು.

..3..

## 06. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಮುಂದುವರೆದ ಚರ್ಚೆ

**ಶ್ರೀಯುತರುಗಳಾದ;–**

| | |
|---|---|
| ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಸಲೀಂ ಅಹಮದ್, ಕೆ.ಎ.ತಿಪ್ಪೇಸ್ವಾಮಿ, ಶರವಣ ಟಿ.ಎ. ಮತ್ತು ಬಿ.ಎಂ. ಫಾರೂಖ್ ಹಾಗೂ ಇತರರುಗಳು | ರಾಜ್ಯದಲ್ಲಿ ಇತ್ತೀಚೆಗೆ ಸುರಿಯುತ್ತಿರುವ ಮಳೆಯಿಂದಾಗಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ ಬಹುತೇಕ ಜಿಲ್ಲೆಗಳು ಪ್ರವಾಹ ಭೀತಿಯನ್ನು ಎದುರಿಸುತ್ತಿದ್ದು, ರಾಜ್ಯದ ಹೆದ್ದಾರಿ ಮತ್ತು ರಸ್ತೆಗಳು ಕೊಚ್ಚಿಹೋಗಿದ್ದು, ಕೆರೆ ಕೋಡಿಗಳು ಒಡೆದು ಅಪಾರ ಹಾನಿಯುಂಟಾಗಿ ಜನರು ಸಂಕಷ್ಟಕ್ಕೆ ಒಳಗಾಗಿರುವ ಕುರಿತು. |

## 07. ಅರ್ಧ ಗಂಟೆ ಕಾಲಾವಧಿ ಚರ್ಚೆ

ರಾಜ್ಯದಲ್ಲಿರುವ ಯಶಸ್ವಿನಿ ಯೋಜನೆ ಕುರಿತು ದಿನಾಂಕ:13.09.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:27 (128)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಪ್ರಕಾಶ್ ಕೆ.ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**